All India Radio: Bangalore
Regional Bulletin In Kannada
27.12.2025 / 6.40 p.m.
ಆಕಾಶವಾಣಿ ಬೆಂಗಳೂರು

ಪ್ರದೇಶ ಸಮಾಚಾರ

ಮುಖ್ಯಾಂಶಗಳು

- ಕಾರವಾರದಲ್ಲಿರುವ ಐಎನ್‌ಎಸ್ ಕದಂಬ ನೌಕಾ ನೆಲೆಗೆ ನಾಳೆ ರಾಷ್ಟ್ರಪತಿ ದ್ರೌಪದಿ ಮುರ್ಮು ಭೇಟಿ
- ರಾಜ್ಯದ ಬಗ್ಗೆ ಕೇಂದ್ರ ಸರ್ಕಾರದ ತಾರತಮ್ಯ ನೀತಿ ವಿರುದ್ಧ ಸಚಿವ ಪ್ರಿಯಾಂಕ್ ಖರ್ಗೆ ಅಸಮಾಧಾನ
- ರೈತರ ಸಮಸ್ಯೆಗಳಿಗೆ ಪರಿಹಾರ ನೀಡುವಲ್ಲಿ ಬೆಳಗಾವಿ ಅಧಿವೇಶನ ವಿಫಲ ; ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ. ವಿಜಯೇಂದ್ರ ಆರೋಪ
- ಬೆಂಗಳೂರಿನಲ್ಲಿಂದು ‘ಅಖಿಲ ಕರ್ನಾಟಕ ದೃಷ್ಟಿ ವಿಶೇಷಚೇತನರ ದ್ವಿತೀಯ ಕನ್ನಡ ಸಾಹಿತ್ಯ ಸಮ್ಮೇಳನ’ಕ್ಕೆ ವಿಧ್ಯುಕ್ತ ಚಾಲನೆ
- ನಾಳೆ ಮನ್ ಕಿ ಬಾತ್‌ನ ೧೨೯ನೇ ಆವೃತ್ತಿಯಲ್ಲಿ ಪ್ರಧಾನಿ ನರೇಂದ್ರ ಮೋದಿ ಭಾರತೀಯರನ್ನುದ್ದೇಶಿಸಿ ಭಾಷಣ

***************

ರಾಷ್ಟ್ರಪತಿ ದ್ರೌಪದಿ ಮುರ್ಮು ನಾಳೆ ಉತ್ತರ ಕನ್ನಡ ಜಿಲ್ಲೆಯ ಕಾರವಾರದಲ್ಲಿರುವ ಐಎನ್‌ಎಸ್ ಕದಂಬ ನೌಕಾ ನೆಲೆಗೆ ಭೇಟಿ ನೀಡಲಿದ್ದಾರೆ. ಅವರು ಗೋವಾದಿಂದ ಕಾರವಾರ ನೌಕಾ ನೆಲೆಗೆ ವಿಮಾನದಲ್ಲಿ ಆಗಮಿಸಲಿದ್ದಾರೆ. ರಾಷ್ಟ್ರಪತಿಯವರನ್ನು ರಾಜ್ಯಪಾಲ ಥಾವರ್‌ಚಂದ್ ಗೆಹ್ಲೋಟ್ ಮತ್ತು ರಾಜ್ಯ ಸಚಿವರು ಸ್ವಾಗತಿಸಲಿದ್ದಾರೆ.

ನೆಲೆಗೆ ಭೇಟಿ ನೀಡಿದ ನಂತರ, ರಾಷ್ಟ್ರಪತಿಗಳು ಕಾರವಾರ ಬಂದರಿನಿಂದ ಜಲಾಂತರ್ಗಾಮಿ ನೌಕೆಯಲ್ಲಿ ಪ್ರಯಾಣಿಸಲಿದ್ದಾರೆ.

ರಾಷ್ಟ್ರಪತಿ ದ್ರೌಪದಿ ಮುರ್ಮು, ೨೦೦೬ರಲ್ಲಿ ವಿಶಾಖಪಟ್ಟಣದಲ್ಲಿ ನೌಕಾ ಜಲಾಂತರ್ಗಾಮಿ ನೌಕೆಯಲ್ಲಿ ಪ್ರಯಾಣಿಸಿದ ಮಾಜಿ ರಾಷ್ಟ್ರಪತಿ ಎಪಿಜೆ ಅಬ್ದುಲ್ ಕಲಾಂ ನಂತರ ಜಲಾಂತರ್ಗಾಮಿ ನೌಕೆಯಲ್ಲಿ ಪ್ರಯಾಣಿಸುತ್ತಿರುವ ಎರಡನೇ ರಾಷ್ಟ್ರಪತಿಯಾಗಿದ್ದಾರೆ. ರಾಷ್ಟ್ರಪತಿಗಳ ಭೇಟಿ ಹಿನ್ನೆಲೆ ಬಿಗಿ ಬಂದೋಬಸ್ತ್ ಕೈಗೊಳ್ಳಲಾಗಿದೆ.

ಕಾರವಾರದಿಂದ ಮಾಜಾಳಿವರೆಗಿನ ಕರಾವಳಿಯ ೧೮ ಕಿಲೋಮೀಟರ್ ವ್ಯಾಪ್ತಿಯಲ್ಲಿ ಮೀನುಗಾರಿಕೆ ಚಟುವಟಿಕೆಗಳನ್ನು ನಿಷೇಧಿಸಲಾಗಿದೆ. ಭಾರತೀಯ ವಾಯುಪಡೆಯ ಎರಡು ಯುದ್ಧ ವಿಮಾನಗಳಲ್ಲಿ ಹಾರಾಟ ನಡೆಸಿದ ಭಾರತದ ಮೊದಲ ರಾಷ್ಟ್ರಪತಿ ದ್ರೌಪದಿ ಮುರ್ಮು ಆಗಿದ್ದಾರೆ.

***************

ಕೇಂದ್ರ ಸರ್ಕಾರವು ತೆರಿಗೆ ಹಂಚಿಕೆಯಲ್ಲಿ ಕರ್ನಾಟಕಕ್ಕೆ ನಿರಂತರ ಅನ್ಯಾಯ ಮಾಡುತ್ತಿದೆ ಎಂದು ಸಚಿವ ಪ್ರಿಯಾಂಕ್ ಖರ್ಗೆ ಅಸಮಾಧಾನ ವ್ಯಕ್ತಪಡಿಸಿದ್ದಾರೆ. ಜಿಎಸ್‌ಟಿ ಪಾವತಿಯಲ್ಲಿ ಮುಂಚೂಣಿಯಲ್ಲಿರುವ ರಾಜ್ಯಕ್ಕೆ ಸಂವಿಧಾನಬದ್ಧವಾಗಿ ಲಭಿಸಬೇಕಾದ ನ್ಯಾಯಸಮ್ಮತ ಆರ್ಥಿಕ ಪಾಲನ್ನು ನೀಡುವಲ್ಲಿ ಕೇಂದ್ರ ವಿಫಲವಾಗಿದೆ ಎಂದು ಅವರು ದೂರಿದರು.

ಉದ್ಯೋಗ ಖಾತರಿ ಯೋಜನೆಯಲ್ಲಿ ಕೇಂದ್ರ ಸರ್ಕಾರ ಕಠಿಣ ತಾಂತ್ರಿಕ ನಿಯಮಗಳನ್ನು ಹೇರುವ ಮೂಲಕ ಪಂಚಾಯತ್ ರಾಜ್ ಸಂಸ್ಥೆಗಳ ಸ್ವಾಯತ್ತತೆಯನ್ನು ಹತ್ತಿಕ್ಕುತ್ತಿದೆ. ಈ ಅನುದಾನ ಕಡಿತದಿಂದ ಗ್ರಾಮೀಣ ಮಹಿಳೆಯರು ಮತ್ತು ದಲಿತ ಕುಟುಂಬಗಳ ಆರ್ಥಿಕ ಸ್ಥಿತಿಯ ಮೇಲೆ ದುಷ್ಪರಿಣಾಮ ಬೀರುತ್ತಿದ್ದು, ಒಕ್ಕೂಟ ವ್ಯವಸ್ಥೆಯ ಆಶಯದಂತೆ ರಾಜ್ಯಗಳ ಸಾಂವಿಧಾನಿಕ ಹಕ್ಕುಗಳನ್ನು ಗೌರವಿಸಬೇಕೆಂದು ಅವರು ಒತ್ತಾಯಿಸಿದರು.

***************

ಬೆಳಗಾವಿ ಅಧಿವೇಶನವು ರೈತರ ಸಮಸ್ಯೆಗಳಿಗೆ ಪರಿಹಾರ ನೀಡುವಲ್ಲಿ ವಿಫಲವಾಗಿದ್ದು, ಸಚಿವರು ಅಭಿವೃದ್ಧಿ ಚರ್ಚೆಗಿಂತ ಆಂತರಿಕ ಕಲಹದಲ್ಲೇ ಮಗ್ನರಾಗಿದ್ದಾರೆ ಎಂದು ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ. ವಿಜಯೇಂದ್ರ ದೂರಿದ್ದಾರೆ.

ಬೆಂಗಳೂರಿನಲ್ಲಿಂದು ಸುದ್ದಿಗೋಷ್ಠಿಯನ್ನುದ್ದೇಶಿಸಿ ಮಾತನಾಡಿದ ಅವರು, ರಾಜ್ಯ ಸರ್ಕಾರದ ಆಡಳಿತ ವೈಖರಿಯನ್ನು ತೀವ್ರವಾಗಿ ಟೀಕಿಸಿದರು.

ಧರ್ಮಸ್ಥಳದ ಕುರಿತಾದ ಎಸ್‌ಐಟಿ ತನಿಖೆಯ ನಿರ್ಧಾರವು ಸಂಶಯಾಸ್ಪದವಾಗಿದ್ದು, ಇದು ಹಿಂದೂ ಭಾವನೆಗಳಿಗೆ ಧಕ್ಕೆ ತರುವ ಷಡ್ಯಂತ್ರ ಎಂದು ಅವರು ಆರೋಪಿಸಿದರು.

ಇದೇ ವೇಳೆ 'ದ್ವೇಷ ಭಾಷಣ' ತಡೆ ಮಸೂದೆಯನ್ನು ಅಭಿವ್ಯಕ್ತಿ ಸ್ವಾತಂತ್ರ್ಯ ಹತ್ತಿಕ್ಕುವ ಕ್ರಮ ಎಂದು ಅವರು ಬಣ್ಣಿಸಿದರು.

***************

ಕನ್ನಡ ಸಾಹಿತ್ಯ ಲೋಕದಲ್ಲಿ ದೃಷ್ಟಿಚೇತನರ ಪ್ರತಿಭೆಗಳನ್ನು ಗುರುತಿಸುವ ಹಾಗೂ ಅವರಿಗೆ ಪ್ರೋತ್ಸಾಹ ನೀಡುವ ಉದ್ದೇಶದಿಂದ ಬೆಂಗಳೂರಿನಲ್ಲಿ ಆಯೋಜಿಸಲಾಗಿರುವ 'ಅಖಿಲ ಕರ್ನಾಟಕ ದೃಷ್ಟಿ ವಿಶೇಷಚೇತನರ ದ್ವಿತೀಯ ಕನ್ನಡ ಸಾಹಿತ್ಯ ಸಮ್ಮೇಳನ'ಕ್ಕೆ ಇಂದು ವಿಧ್ಯುಕ್ತ ಚಾಲನೆ ದೊರೆತಿದೆ.

ಕರ್ನಾಟಕ ಅಂಧರ ಸಾಹಿತ್ಯ ಪರಿಷತ್ತು ಮತ್ತು ಸಮರ್ಥನಂ ವಿಶೇಷಚೇತನರ ಸಂಸ್ಥೆಯ ಸಂಯುಕ್ತ ಆಶ್ರಯದಲ್ಲಿ ನಡೆಯುತ್ತಿರುವ ಈ ಸಮ್ಮೇಳನವನ್ನು ನಾಡೋಜ ಪ್ರೊ. ಬರಗೂರು ರಾಮಚಂದ್ರಪ್ಪ ಹಾಗೂ ಟ್ರಸ್ಟ್‌ನ ವ್ಯವಸ್ಥಾಪಕ ವಿಶ್ವಸ್ಥ ಡಾ. ಜಿ.ಕೆ.ಮಹಾಂತೇಶ್ ಕಿವಡಸಣ್ಣವರ್ ಉದ್ಘಾಟಿಸಿದರು. ಸಮ್ಮೇಳನದ ಸರ್ವಾಧ್ಯಕ್ಷತೆಯನ್ನು ಹಿರಿಯ ಜಾನಪದ ವಿದ್ವಾಂಸ ನಾಡೋಜ ಡಾ. ಗೊ.ರು. ಚನ್ನಬಸಪ್ಪ ಅವರು ವಹಿಸಿದ್ದಾರೆ.

ಉದ್ಘಾಟನಾ ಸಮಾರಂಭದಲ್ಲಿ ರಾಜ್ಯದ ಇತಿಹಾಸದಲ್ಲೇ ಇದೇ ಮೊದಲ ಬಾರಿಗೆ ದೃಷ್ಟಿಚೇತನ ಬರಹಗಾರರು ರಚಿಸಿದ ವಿವಿಧ ಪ್ರಕಾರದ ಒಟ್ಟು ಆರು ಕೃತಿಗಳನ್ನು ಲೋಕಾರ್ಪಣೆ ಮಾಡಲಾಯಿತು.

ಉದ್ಘಾಟನೆಯ ಬಳಿಕ ಸಮ್ಮೇಳನದಲ್ಲಿ ಸಾಹಿತ್ಯಿಕ ಚಟುವಟಿಕೆಗಳು ನಡೆದವು.  'ಆಧುನಿಕ ಕನ್ನಡ ಸಾಹಿತ್ಯಕ್ಕೆ ದೃಷ್ಟಿಚೇತನ ಬರಹಗಾರರ ಕೊಡುಗೆಗಳು' ಹಾಗೂ 'ಅಂಧತ್ವ ಮತ್ತು ಸಾಹಿತ್ಯ ಸಂಕಥನಗಳು' ಎಂಬ ವಿಷಯಗಳ ಕುರಿತು ವಿಶೇಷ ಗೋಷ್ಠಿಗಳನ್ನು ಆಯೋಜಿಸಲಾಗಿತ್ತು.

ರಾಜ್ಯದ ೨೫ಕ್ಕೂ ಹೆಚ್ಚು ಅಂಧ ಕವಿ-ಕವಯತ್ರಿಯರು ತಮ್ಮ ಸ್ವರಚಿತ ಕವನಗಳನ್ನು ವಾಚಿಸಿದರು.

***************

ಆಕಾಶವಾಣಿಯ ಜನಪ್ರಿಯ ಕಾರ್ಯಕ್ರಮ 'ಮನ್ ಕಿ ಬಾತ್'ನಲ್ಲಿ ನಾಳೆ ಬೆಳಗ್ಗೆ ೧೧ ಗಂಟೆಗೆ ಪ್ರಧಾನಿ ನರೇಂದ್ರ ಮೋದಿ ಅವರು, ದೇಶ ಮತ್ತು ವಿದೇಶಗಳ ಭಾರತೀಯರನ್ನುದ್ದೇಶಿಸಿ ತಮ್ಮ ಮನದ ಮಾತನ್ನು ಹಂಚಿಕೊಳ್ಳಲಿದ್ದಾರೆ.

ಇದು ಮನ್ ಕಿ ಬಾತ್‌ನ ೧೨೯ನೇ ಆವೃತ್ತಿಯಾಗಿದೆ. ಈ ಕಾರ್ಯಕ್ರಮ ಎಲ್ಲಾ ಆಕಾಶವಾಣಿ ಮತ್ತು ದೂರದರ್ಶನ ವಾಹಿನಿಗಳು, ಆಕಾಶವಾಣಿ ಸುದ್ದಿ ಜಾಲತಾಣ ಮತ್ತು ನ್ಯೂಸ್ ಆನ್ ಏರ್ ಮೊಬೈಲ್ ಅಪ್ಲಿಕೇಶನ್‌ನಲ್ಲಿ ಪ್ರಸಾರವಾಗಲಿದೆ.

ಇದನ್ನು ಆಕಾಶವಾಣಿ, ಡಿಡಿ ನ್ಯೂಸ್, ಪ್ರಧಾನಮಂತ್ರಿ ಕಚೇರಿ ಹಾಗೂ ಮಾಹಿತಿ ಮತ್ತು ಪ್ರಸಾರ ಸಚಿವಾಲಯದ ಯೂಟ್ಯೂಬ್ ಚಾನೆಲ್‌ಗಳಲ್ಲಿಯೂ ನೇರ ಪ್ರಸಾರ ಮಾಡಲಾಗುತ್ತದೆ. ಹಿಂದಿ ಪ್ರಸಾರದ ನಂತರ ಪ್ರಾದೇಶಿಕ ಭಾಷೆಗಳಲ್ಲಿ ಕಾರ್ಯಕ್ರಮವನ್ನು ಪ್ರಸಾರ ಮಾಡಲಾಗುವುದು.

***************

ಕೇಂದ್ರ ಸಂಸದೀಯ ವ್ಯವಹಾರ ಹಾಗೂ ಅಲ್ಪಸಂಖ್ಯಾತರ ಖಾತೆ ಸಚಿವ ಕಿರಣ್ ರಿಜಿಜು ನಾಳೆ ಉತ್ತರ ಕನ್ನಡ ಜಿಲ್ಲೆಯ ಮುಂಡಗೋಡದ ಟಿಬೇಟಿಯನ್ ಕಾಲೋನಿಗೆ ಭೇಟಿ ನೀಡಲಿದ್ದಾರೆ.

ಭೇಟಿಯ ಭಾಗವಾಗಿ ಸಚಿವರು ಬೆಳಗ್ಗೆ ೯.೩೦ ಕ್ಕೆ  ಬೌದ್ಧ ಪರಿಷತ್ ಅನ್ನು ಉದ್ಘಾಟಿಸಲಿದ್ದಾರೆ.

***************

ಬೆಂಗಳೂರಿನ ಬಸವನಗುಡಿಯ ನ್ಯಾಷನಲ್ ಕಾಲೇಜು ಮೈದಾನದಲ್ಲಿ ನಡೆಯುತ್ತಿರುವ ಅವರೆಬೇಳೆ ಮೇಳಕ್ಕೆ ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಭೇಟಿ ನೀಡಿದರು.

ಬಳಿಕ, ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಹಲವು ವರ್ಷಗಳಿಂದ ವಾಸವಿ ಕಂಡಿಮೆಂಡ್ಸ್ ನಡೆಸುತ್ತಿರುವ ಈ ಮೇಳವು ರೈತರು ಬೆಳೆದ ಅವರೆಕಾಯಿಯನ್ನು ನೇರವಾಗಿ ಗ್ರಾಹಕರಿಗೆ

ತಲುಪಿಸುವ ಜೊತೆಗೆ ಅವರೆಕಾಯಿಯಿಂದ ತಯಾರಿಸಿದ ವಿಶಿಷ್ಟ ಆಹಾರ ಪದಾರ್ಥಗಳ ಮೂಲಕ ಬೆಂಗಳೂರಿನ ಆಹಾರ ಪ್ರಿಯರ ಮನಗೆದ್ದಿದೆ ಎಂದರು.

ಈ ಸಂದರ್ಭದಲ್ಲಿ ಮಾಜಿ ಕಾರ್ಪೊರೇಟರ್ ಯುವರಾಜ್, ವಾಸವಿ ಕಾಂಡಿಮೆಂಟ್ಸ್ ನ ಸ್ವಾತಿ ಸೇರಿ ಅನೇಕರು ಉಪಸ್ಥಿತರಿದ್ದರು.

***************

ರಾಜ್ಯದ ಜೈನ ಸಮುದಾಯದ ಅಭಿವೃದ್ಧಿಗಾಗಿ ಬರುವ ಆಯವ್ಯಯದಲ್ಲಿ ೨೦೦ ಕೋಟಿ ರೂಪಾಯಿ ಅನುದಾನ ಮೀಸಲಿಡುವಂತೆ ಮುಖ್ಯಮಂತ್ರಿಗಳಿಗೆ ಮನವಿ ಮಾಡಲಾಗುವುದು ಎಂದು ಸಚಿವ ಡಿ.ಸುಧಾಕರ್ ಹೇಳಿದ್ದಾರೆ.

ದಾವಣಗೆರೆಯಲ್ಲಿಂದು ಜೈನ ಸಮಾಜದಿಂದ  ಹಮ್ಮಿಕೊಂಡಿದ್ದ ಕಾರ್ಯಕ್ರಮದಲ್ಲಿ ಮಾತನಾಡಿದ ಅವರು, ಕಳೆದ ಮೂರು ಬಜೆಟ್ ಗಳಲ್ಲಿ ಕ್ರಮವಾಗಿ ೨೫, ೫೦ ,೧೦೦ ಕೋಟಿ ರೂಪಾಯಿ ಅನುದಾನ ಮೀಸಲಿಡಲಾಗಿತ್ತು. ಬರುವ ಬಜೆಟ್ ನಲ್ಲಿ ೨೦೦ ಕೋಟಿ ರೂಪಾಯಿ ಗಳನ್ನು ತೆಗೆದಿರಿಸುವಂತೆ ಮುಖ್ಯಮಂತ್ರಿಗಳಿಗೆ ಮನವಿ ಮಾಡಲಾಗುವುದು ಎಂದರು.

ಅಲ್ಪ ಸಂಖ್ಯಾತರ ಕಲ್ಯಾಣ ಇಲಾಖೆಯ ಮೂಲಕ ಜೈನ ಬಸದಿಯ ಪ್ರಧಾನ  ಅರ್ಚಕರಿಗೆ ನೀಡುವ ಮಾಸಿಕ  ೬ ಸಾವಿರ ಮತ್ತು ಸಹಾಯಕ ಅರ್ಚಕರಿಗೆ ನೀಡುವ ೫ ಸಾವಿರ  ರೂಪಾಯಿ ವೇತನಕ್ಕಾಗಿ ಮೀಸಲಿಡಲಾಗಿದ್ದ ೧೦ ಕೋಟಿ ರೂಪಾಯಿ ಅನುದಾನದಲ್ಲಿ ೬ ಕೋಟಿ ೫೦ ಲಕ್ಷ ರೂಪಾಯಿ ಮಾತ್ರ ವೆಚ್ಚವಾಗಿದ್ದು. ಇನ್ನೂ ೩ ಕೋಟಿ ೫೦ ಲಕ್ಷ ಉಳಿದಿದೆ. ಈ ಅನುದಾನದ ಸದುಪಯೋಗಕ್ಕೆ ಅರ್ಚಕರು ಮುಂದೆ ಬರಬೇಕು ಎಂದು ಸಚಿವ ಡಿ.ಸುಧಾಕರ್ ಹೇಳಿದರು.

***************

ಸರ್ಕಾರ ಕೆಲವು ತಿಂಗಳ ಹಿಂದೆ ಸಂರಕ್ಷಿತ ಹುಲ್ಲುಗಾವಲು ಎಂದು ಘೋಷಿಸಿರುವ ಹೆಸರುಘಟ್ಟ ಕೆರೆ ಸೇರಿದಂತೆ ೫ ಸಾವಿರ ೬೭೮ ಎಕರೆ ಹುಲ್ಲುಗಾವಲು ಪ್ರದೇಶಕ್ಕೆ ಅರಣ್ಯ, ಜೀವಿಶಾಸ್ತ್ರ ಮತ್ತು ಪರಿಸರ ಸಚಿವ ಈಶ್ವರ ಬಿ ಖಂಡ್ರೆ ಅವರಿಂದು ಭೇಟಿ ನೀಡಿ ಪರಿಶೀಲನೆ ನಡೆಸಿದರು.

ವರ್ಷದಲ್ಲಿ ೧೦ ಲಕ್ಷ ಜನರಿಗೆ ನೀರು ಪೂರೈಸುವ ಸಾಮರ್ಥ್ಯವಿರುವ ಹೆಸರುಘಟ್ಟ ಕೆರೆಗೆ ಗೃಹ ತ್ಯಾಜ್ಯ, ಕೈಗಾರಿಕಾ ತ್ಯಾಜ್ಯ ಸೇರದಂತೆ ಎಚ್ಚರಿಕೆ ವಹಿಸಬೇಕು, ಅರ್ಕಾವತಿ ನದಿ ಮಲಿನವಾಗದಂತೆ ಎಚ್ಚರಿಕೆ ವಹಿಸಬೇಕು ಎಂದು ತಿಳಿಸಿದರು.

ಸ್ಥಳೀಯ ಗ್ರಾಮ ಪಂಚಾಯ್ತಿಗಳ ಮತ್ತು ಸಾರ್ವಜನಿಕರ ಸಹಕಾರ ಪಡೆದು ನೈಸರ್ಗಿಕವಾಗಿ ಬೆಳೆದಿರುವ ಹುಲ್ಲುಗಾವಲಿನ ಸಂರಕ್ಷಣೆಯ ಜೊತೆಗೆ ಸಂವರ್ಧನೆಯನ್ನೂ ಮಾಡಬೇಕು, ಸುತ್ತಮುತ್ತಲ ಗ್ರಾಮಗಳ ಜನರ ದನಕರು, ಮೇಕೆ ಮೇಯಲು ಮುಕ್ತ ಅವಕಾಶ ಇರಬೇಕು ಎಂದು ತಿಳಿಸಿದರು.

ಸಣ್ಣ ನೀರಾವರಿ ಇಲಾಖೆ, ಬೆಂಗಳೂರು ನಗರ ನೀರು ಸರಬರಾಜು ಮತ್ತು ಒಳಚರಂಡಿ ಮಂಡಳಿ ಹಾಗೂ ಸ್ಥಳೀಯ ಸಂಸ್ಥೆಗಳ ಸಹಕಾರದೊಂದಿಗೆ ಹೆಸರುಘಟ್ಟ ಪ್ರದೇಶದ ಸಮಗ್ರ ಸಂರಕ್ಷಣೆ ಹಾಗೂ ಅಭಿವೃದ್ಧಿಗೆ ಸಿಎಸ್ಆರ್ ನಿಧಿ ಬಳಕೆ ಮಾಡಿಕೊಳ್ಳಲು ಮತ್ತು ಅರಣ್ಯ ಇಲಾಖೆಯಿಂದ ಇದಕ್ಕಾಗಿ ಹಣ ಮೀಸಲಿಡಲು ಕಾರ್ಯಯೋಜನೆ ರೂಪಿಸುವಂತೆ ಪ್ರಧಾನ ಮುಖ್ಯ ಅರಣ್ಯ ಸಂರಕ್ಷಣಾಧಿಕಾರಿ ಮೀನಾಕ್ಷಿ ನೇಗಿ ಅವರಿಗೆ ಸೂಚಿಸಿದರು.

***************

ಶಿಕ್ಷಣವು ಭಾಷೆ, ಧರ್ಮ, ರಾಜ್ಯ ಅಥವಾ ದೇಶದ ಗಡಿಗಳನ್ನು ಮೀರಿ ಸಾಗುವ ಶಕ್ತಿಯಾಗಿದೆ ಎಂದು ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಸಚಿವ ಮಧು ಬಂಗಾರಪ್ಪ ಹೇಳಿದ್ದಾರೆ.

ಮುಂಡಗೋಡಿನ ಟಿಬೆಟಿಯನ್ ಕಾಲನಿಯಲ್ಲಿರುವ ಶಾಲೆಯೊಂದರ ವಾರ್ಷಿಕೋತ್ಸವ ಕಾರ್ಯಕ್ರಮದಲ್ಲಿ ಭಾಗವಹಿಸಿ ಸಭೆಯನ್ನು ಉದ್ದೇಶಿಸಿ ಮಾತನಾಡಿದ ಅವರು, ಶಾಂತಿ ಮತ್ತು ಅಭಿವೃದ್ಧಿಗೆ ಶಿಕ್ಷಣ ಹಾಗೂ ಮಾನವೀಯ ಮೌಲ್ಯಗಳು ಅತ್ಯಗತ್ಯವಾಗಿದೆ. ಸರ್ಕಾರದ ಮೂಲಕ ವಿದ್ಯಾರ್ಥಿಗಳಿಗೆ ಮಧ್ಯಾಹ್ನದ ಊಟ, ಮೊಟ್ಟೆ, ಹಾಲು, ರಾಗಿ ಮಾಲ್ಟ್, ಉಚಿತ ಪಠ್ಯಪುಸ್ತಕ, ನೋಟುಪುಸ್ತಕ, ಯೂನಿಫಾರ್ಮ್, ಶೂ ಹಾಗೂ ಸಾಕ್ಸ್‌ಗಳನ್ನು ಒದಗಿಸಲಾಗುತ್ತಿದೆ. ರಾಜ್ಯದ ಶಿಕ್ಷಣ ವ್ಯವಸ್ಥೆಯಡಿ ಸರ್ಕಾರಿ, ಅನುದಾನಿತ ಹಾಗೂ ಖಾಸಗಿ ಶಾಲೆಗಳನ್ನು ಸೇರಿಸಿ ಸುಮಾರು ೧.೧೬ ಕೋಟಿ ವಿದ್ಯಾರ್ಥಿಗಳು ಶಿಕ್ಷಣ ಪಡೆಯುತ್ತಿದ್ದಾರೆ ಎಂದರು.

***************

ವಿಕಸಿತ ಭಾರತದ ದೂರ ದೃಷಿಯೊಂದಿಗೆ ಪ್ರಧಾನಿ ನರೇಂದ್ರ ಮೋದಿ ರಾಷ್ಟ್ರೀಯ ಶಿಕ್ಷಣ ನೀತಿಯನ್ನು ಜಾರಿಗೆ ತಂದಿದ್ದಾರೆ ಎಂದು ಸಂಸದ ಬಸವರಾಜ ಬೊಮ್ಮಾಯಿ ತಿಳಿಸಿದ್ದಾರೆ.

ಹಾವೇರಿ ಜಿಲ್ಲೆಯ ಹಾನಗಲ್ಲ ತಾಲೂಕಿನ ಮಹಾರಾಜಪೇಟೆ ಗ್ರಾಮದಲ್ಲಿರುವ ಜವಾಹರ ನವೋದಯ ವಿದ್ಯಾಲಯದಲ್ಲಿಂದು ನಡೆದ ನವೋತ್ಸವ - ೨೦೨೫ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದ ಅವರು, ಎನ್‌ಇಪಿ ಜಾರಿಯಾಗಿರುವ ರಾಜ್ಯದಲ್ಲಿ ಶಿಕ್ಷಣ ಮಟ್ಟ ಉತ್ತಮವಾಗಿರುತ್ತದೆ. ಆದರೆ ರಾಜ್ಯದ ಶಾಲೆಗಳಲ್ಲಿ ಎನ್‌ಇಪಿ ಜಾರಿಯಿಲ್ಲದಿರುವುದರಿಂದ ರಾಜ್ಯದ ಮಕ್ಕಳು ವಂಚಿತರಾಗಿದ್ದಾರೆ ಎಂದರು.

ಬಳಿಕ, ಹುಕ್ಕೇರಿ ಮಠದ ಆವರಣದಲ್ಲಿ ಜಾತ್ರಾ ಮಹೋತ್ಸವದ ಅಂಗವಾಗಿ ಆಯೋಜಿಸಲಾದ ಫಲಪುಷ್ಪ ಪ್ರದರ್ಶನವನ್ನು ಸಂಸದ ಬಸವರಾಜ ಬೊಮ್ಮಾಯಿ ಉದ್ಘಾಟಿಸಿದರು.

***************

ಕೊಡಗು ಜಿಲ್ಲೆಯ ಕೂಡಿಗೆಯಲ್ಲಿ ೧೮ ವರ್ಷಗಳಿಂದ ರಕ್ಷಣಾ ಸಚಿವಾಲಯದ ಅಧೀನದಲ್ಲಿ ಕಾರ್ಯನಿರ್ವಹಿಸುತ್ತಿರುವ ಸೈನಿಕ ಶಾಲೆಯ ಶೈಕ್ಷಣಿಕ ಮತ್ತು ಸರ್ವಾಂಗೀಣ ಪ್ರಗತಿ ಬಗ್ಗೆ ಮೈಸೂರು - ಕೊಡಗು ಸಂಸದ ಯದುವೀರ್ ಒಡೆಯರ್ ಸಂತಸ ವ್ಯಕ್ತಪಡಿಸಿದ್ದಾರೆ.

*******ಮುಕ್ತಾಯ********